ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಮಹಿಳೆಯರಿಗೆ, ಗರ್ಭಿಣಿಯರಿಗೆ ಮತ್ತು ಮಕ್ಕಳಿಗೆ ನೀಡಲಾಗಿರುವ ಸೌಲಭ್ಯಗಳ ಬಗ್ಗೆ

ಶ್ರೀ ಮರಿತಿಬ್ಬೇಗೌಡ(ಶಿಕ್ಷಕರ ಕ್ಷೇತ್ರ):-

1359 (1631) ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ ಮಹಿಳೆಯರಿಗೆ, ಗರ್ಭಿಣಿ ಸ್ತ್ರೀಯವರಿಗೆ ಮತ್ತು ಮಕ್ಕಳಿಗೆ ಯಾವ ಯಾವ ಯೋಜನೆಗಳನ್ನು ಜಾರಿಗೆ ತರಲಾಗಿದೆ; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಭಾಗ್ಯಲಕ್ಷ್ಮಿ ಹಾಗೂ ಮಡಿಲು ಯೋಜನೆಯ ಫಲಾನುಭವಿಗಳ ಸಂಖ್ಯೆ ಎಷ್ಟು ;

(ಇ) ಫಲಾನುಭವಿಗಳ ಆಯ್ಕೆಯ ಮಾನದಂಡಗಳೇನು ; (ವಿವರ ನೀಡುವುದು)

(ಈ) ಈ ಫಲಾನುಭವಿಗಳಿಗೆ ಪ್ರೋತ್ಸಾಹಧನ ಹಾಗೂ ಇನ್ನಿತರೆ ಸವಲತ್ತುಗಳನ್ನು ಪೂರ್ಣ ಪ್ರಮಾಣದಲ್ಲಿ ವಿತರಣೆ ಮಾಡಲಾಗಿದೆಯೇ ;

(ಉ) ಬಾಕಿ ಇದ್ದಲ್ಲಿ ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು?